ನಷ್ಟಗೊಳಿಸಿಕೊಂಡು ಒಂದೇ ಉಸುರಿಗೆ ಓಡಿ ಬಸ್ ಹಿಡಿದು... ಟೆನ್ಷನ್ ಟೆನ್ಷನ್ ಎಲ್ಲೆಲ್ಲೂ ಟೆನ್ಷನ್...

ಓಡುತ್ತಿರುವವಳು ನಾನೊಬ್ಬಳೇ ಅಲ್ಲ. ಒಂದನ್ನೊಂದು ಹಿಮ್ಮೆಟ್ಟಿ ಸಾಗುವ ವಾಹನಗಳು, ತಮ್ಮ ಗಮ್ಯವನ್ನು ತಲುಪಲು ತರಾತುರಿಯಲ್ಲಿ ಸಾಗುತ್ತಿರುವ ಜನ ಪ್ರವಾಹ, ಎಲ್ಲೆಲ್ಲೂ ವೇಗೋತ್ಕರ್ಷಕ ಮಿಂಚಿನ ಓಟ... 'ಓಡಿ ಹೋಗಿ ಗೋಡೆ ಮುಟ್ಟಿದ ಹಾಗೆ' ಎನ್ನುತ್ತಿದ್ದ ಅಜ್ಜಿಯ ಉಕ್ತಿಯಂತೆ!

ಭೂಮಿ ಹಾಗೂ ಗ್ರಹಗಳು ಸೂರ್ಯನನ್ನು ಸುತ್ತುವ ಹಾಗೂ ನಮ್ಮ ಸೌರ ವ್ಯೂಹದಂತೆಯೇ ಇತರ ಖಗೋಳ ವ್ಯವಸ್ಥೆಗಳಲ್ಲೆಲ್ಲಾ ಸುವ್ಯವಸ್ಥೆಯಲ್ಲಿರಲು ವೇಗ ಅನಿವಾರ್ಯ. ಪರಮಾಣು ವಿನೊಳಗಿನ ಎಲೆಕ್ಟ್ರಾನ್‌ಗಳದ್ದೂ ಎಂದೂ ನಿಲ್ಲದ ಓಟವೇ. ಸುತ್ತಮುತ್ತಲಿನ ಮೈಕ್ರೋ-ಮ್ಯಾಕ್ರೋ ನಿರ್ಜೀವ ಜಗತ್ತೂ ಜಲ್ದಿಯ ಜರೂರತ್ತಿನಲ್ಲೇ ಇದೆ. ಆದರೆ ನಮ್ಮಂಥಾ ಕ್ಷುದ್ರಜೀವಿಗಳು ಅವಿಶ್ರಾಂತ ಆತುರದಲ್ಲಿದ್ದರೆ ಜೀವ ಯಂತ್ರದ ಪಾಡೇನು ಎಂಬ ಆಲೋಚನೆಯೂ ಬರುವುದಿದೆ.



ಮೊದಲೆಲ್ಲಾ ಮನೆಗೆ ಅತಿಥಿಗಳು ಬಂದರೆ ಹಾಗೂ ಸಮಾರಂಭಗಳಲ್ಲಿ 'ಸಾವಧಾನವಾಗಿ ಊಟವಾಗಲಿ' ಎಂದು ಪ್ರತಿಯೊಬ್ಬರಿಗೂ ಹೇಳುವುದೇ ಒಂದು ಸತ್ಸಂಪ್ರದಾಯವಾಗಿತ್ತು. ಈಗ ಮದುವೆ, ಗೃಹ ಪ್ರವೇಶಗಳಂಥಾ ಕಾರ್ಯಕ್ರಮಗಳಿಗೆ ಹೋದಾಗ ಗಿಜಿಗುಡುವ ಆ ಜನಜಂಗುಳಿಯಲ್ಲಿ ತಮಗೊಂದು ಊಟದೆಲೆಯನ್ನು ರಿಸರ್ವ್ ಮಾಡಿ ಕೊಳ್ಳುವುದೇ ಹರಸಾಹಸವಾಗಿ ಇನ್ನೂ ಊಟ ಮಾಡುತ್ತಿರುವವರ ಹಿಂದೆ ನಿಂತು ಎಷ್ಟು ಹೊತ್ತಿಗೆ ಮುಗಿಸ್ತಾರಪ್ಪಾ (ಜಲ್ದಿಜಲ್ದಿ!) ಎಂದು ಕಾಯುವವರ ನಡುವೆ ನಿಧಾನದ ಮಾತಿರಲಿ ಎದ್ದರೆ ಸಾಕು ಎನ್ನುವ ವಾತಾವರಣವುಂಟಾಗಿರುತ್ತದೆ. ಇನ್ನು ಹೋಟೆಲ್‌ಗಳಲ್ಲಿ ಅದೂ ವೀಕೆಂಡ್‌ಗಳಲ್ಲಂತೂ ಕೇಳುವಂತೆಯೇ ಇಲ್ಲ. ನಿಂತು, ನಡೆಯುತ್ತಾ, ಓಡುತ್ತಾ ತಿನ್ನುವ ವೈವಿಧ್ಯ ಮಾದರಿಗಳನ್ನೂ ಕಾಣಬಹುದು.

ಇಂಥಾ ವೈಪರೀತ್ಯಗಳ ನಡುವೆ ಇತ್ತೀಚೆಗೆ ವೈರಲ್ಲಾಗಿದ್ದ ಒಂದು 'ಲೆಮನ್ ರೇಸ್' ವಿಡಿಯೋ ನನ್ನನ್ನು ಬಹಳವಾಗಿ ಆಕರ್ಷಿಸಿತು. ಬಾಯಲ್ಲಿ ನಿಂಬೆಹಣ್ಣು ಇಟ್ಟುಕೊಂಡು ಆಡುವ ಆಟದಲ್ಲಿ ಪಾಲ್ಗೊಂಡಿದ್ದ ಪುಟಾಣಿಗಳು ಬೇಗ ಗುರಿ ಮುಟ್ಟುವ ಉದ್ದೇಶದಿಂದ ಓಡೋಡಿ ಹೋಗುವಾಗ, ಎಲ್ಲರ ಬಾಯಲ್ಲಿರುವ ಚಮಚದಲ್ಲಿನ ನಿಂಬೆಹಣ್ಣು ಬಿದ್ದು ಹೋಗುತ್ತದೆ. ಇವರ ನಡುವಿನ ಪುಟ್ಟ ಬಾಲಕನೊಬ್ಬ ಎಲ್ಲರೂ ಓಡಿ ಹೋದರೂ ತಲೆಕೆಡಿಸಿಕೊಳ್ಳದೆ ನಿಧಾನವಾಗಿ ಸಾಗುವುದರಿಂದ ಅವನ ನಿಂಬೆಹಣ್ಣು ಬೀಳದೆ ಗುರಿಯನ್ನು ತಲುಪಿ ಜಯ ಸಾಧಿಸಿದ ವಿಡಿಯೋವನ್ನು 10 ಮಿಲಿಯನ್ ಮಂದಿ ವೀಕ್ಷಿಸಿ 'ನಿಧಾನವೇ ಪ್ರಧಾನ' ಎನ್ನುವ ಹಿರಿಯರ ಮಾತು ಎಷ್ಟು ನಿಜ ಎಂದು ಹೇಳಿದ್ದಾರೆ. 'ಜೀವನದಲ್ಲಿ ನಿಧಾನವಾಗಿ ಹೋದರೆ ಜಯ ಸಾಧಿಸುತ್ತೀರ, ಜಯವನ್ನು ಬೇಗನೆ ಸಾಧಿಸಬೇಕು ಎನ್ನುವ ಉದ್ದೇಶದಿಂದ ಓಡಬೇಡಿ' ಎನ್ನುವ ಮಾತೂ ಹರಿದಾಡಿ 'ಆಹಾ ನಾನೆಲ್ಲಿದ್ದೇನೆ' ಎಂದು ಗಾಬರಿ ಪಡುವಂತಾಯ್ತು. ಓಡದಿದ್ದರೆ ಬಸ್ ಸಿಗುವುದಿಲ್ಲವಲ್ಲ ಎನಿಸಿದರೂ ಈಗಿನ ವಿಶ್ರಾಂತ ಬದುಕಿನಲ್ಲಂತೂ ಆ ಚಿಂತೆಯಿಲ್ಲವಲ್ಲ ಎಂಬ ನಿರಾಳದಲ್ಲಿ ಜಲ್ದಿಯ ಜರೂರತ್ತಿಗೆ 'ಗುಡ್ ಬೈ' ಹೇಳಿ ಸಾವಧಾನವಾಗಿ ಬದುಕ ಮುನ್ನಡೆಸುತ್ತಾ ನನ್ನ ಸಹಜ ಪ್ರವೃತ್ತಿಯಾದ ಧ್ಯಾನಸ್ಥ ನಿಧಾನಕ್ಕೆ ಶರಣಾಗುತ್ತಿದ್ದೇನೆ.

●